# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 548(464) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 14.08.2025 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದ ರಸ್ತೆಗಳಿಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲು ಬೆಂಗಳೂರು ವಿಶ್ವವಿದ್ಯಾಲಯ ಮುಂದಾಗಿರುವುದು ನಿಜವೇ; ಹೌದಾದಲ್ಲಿ, ಕಾರಣವೇನು; (ಮಾಹಿತಿ ಒದಗಿಸುವುದು) | ದಿನಾಂಕ:16-07-2025 ರಂದು ನಡೆದ ಸಿಂಡಿಕೇಟ್ ಸಭೆಯಲ್ಲಿ ಜ್ಞಾನಭಾರತಿ ಆವರಣದಲ್ಲಿ ಹೆಚ್ಚಿನ ವಾಹನ ದಟ್ಟಣೆಯಿಂದ ಶಬ್ದ ಮಾಲಿನ್ಯ ಹಾಗೂ ಅಪಘಾತ ಹೆಚ್ಚಾಗಿರುವುದರಿಂದ, ಆಗಿಂದಾಗ್ಗೆ ವಿದ್ಯಾರ್ಥಿಗಳು ಅಪಘಾತಕ್ಕೀಡಾಗಿ ತೊಂದರೆಗೊಳಗಾಗಿರುತ್ತಾರೆ. ಆದ್ದರಿಂದ, ವಿದ್ಯಾರ್ಥಿಗಳು ಹಾಗೂ ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳ ಹಿದೃಷ್ಟಿಯಿಂದ ನಾಗರಭಾವಿ ಕಡೆಯಿಂದ ವಿಶ್ವವಿದ್ಯಾಲಯಕ್ಕೆ ಹಾದುಹೋಗುವ ರಸ್ತೆಯಲ್ಲಿ ಸಾರ್ವಜನಿಕ ವಾಹನ ಸಂಚಾರವನ್ನು ನಿರ್ಬಂಧಿಸಬೇಕೆಂದು ನಿರ್ಣಯಿಸಿ, ಈ ಬಗ್ಗೆ ಸರ್ಕಾರಕ್ಕೆ ಹಾಗೂ ಪೊಲೀಸ್ ಇಲಾಖೆಗೆ ಪತ್ರ ಬರೆಯಬೇಕೆಂದು ಸಿಂಡಿಕೇಟ್ ಸೂಚಿಸಿದ್ದು, ಅದರಂತೆ ಬೆಂಗಳೂರು ವಿಶ್ವವಿದ್ಯಾಲಯವು ಕ್ರಮ ವಹಿಸುತ್ತಿದೆ. |
| ಆ) | ಈ ವಿಶ್ವವಿದ್ಯಾಲಯದ ವಿ.ವಿ. ಆವರಣದ ಒಳಗೆ ಸಾರ್ವಜನಿಕರಿಗೆ ನಿರ್ಬಂಧ ವಿಧಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದಲ್ಲದೆ ಈ ಭಾಗದಲ್ಲಿ ಹೆಚ್ಚಿನ ಟ್ರಾಫಿಕ್ ತೊಂದರೆ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ಒದಗಿಸುವುದು) | |

| | | |
|---|---|---|
| ಇ) | ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದ ರಸ್ತೆಗಳಿಗೆ ಸಾರ್ವಜನಿಕರಿಗೆ ಪ್ರವೇಶವನ್ನು ನಿರ್ಬಂಧಿಸದಂತೆ ಬಿ.ಬಿ.ಎಂ.ಪಿ.ಯು ಬೆಂಗಳೂರು ವಿ.ವಿ. ಆಡಳಿತ ಮಂಡಳಿಗೆ ಮನವರಿಕೆ ಮಾಡಲು ಪ್ರಯತ್ನಿಸುವುದೇ? (ಮಾಹಿತಿ ಒದಗಿಸುವುದು) | ಈ ಬಗ್ಗೆಯ ಯಾವುದೇ ಪ್ರಸ್ತಾವನೆ ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಂದೆ ಇರುವುದಿಲ್ಲ. |

ಸಂಖ್ಯೆ: ಇಡಿ/384 /ಯುಬಿವಿ/2025

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು